# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಎಚ್.ರಸ್ತೆ, ತುಮಕೂರು-572 103

ದೂರವಾಣಿ : 0816-2254546, 0816-2255596, 0816-2255597 ಫ್ಯಾಕ್ಸ್ : 0816-2270719


ಸಂಖ್ಯೆ:ತುವಿ:ಸಾ&ಅ-ಖ.ಕೋ:2022-23/ 381 ದಿನಾಂಕ:09.05.2022

## ದರಪಟ್ಟಿ ಆಹ್ವಾನ (ವಿ.ವಿ.ವೆಬ್‌ಸೈಟ್)

ವಿಷಯ: ತುಮಕೂರು ವಿಶ್ವವಿದ್ಯಾನಿಲಯದ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮಕ್ಕೆ ಊಟವನ್ನು ಸರಬರಾಜು ಪಡೆಯಲು ದರಪಟ್ಟಿ ಆಹ್ವಾನಿಸಿರುವ ಕುರಿತು.

ಉಲ್ಲೇಖ: ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:09.05.2022(ಕಂಡಿಕೆ-121)

* * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ದಿನಾಂಕ:20.05.2022ರಂದು ಆಯೋಜಿಸಿರುವ ತುಮಕೂರು ವಿಶ್ವವಿದ್ಯಾನಿಲಯದ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮಕ್ಕೆ ಊಟವನ್ನು ಸರಬರಾಜು ಪಡೆಯಲು ಈ ಕೆಳಕಂಡ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು ಆಸಕ್ತ ಸಂಸ್ಥೆಗಳಿಂದ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ.

| ಕ್ರ. ಸಂ. | ವಿವರ | ಅಂದಾಜು ಪ್ರಮಾಣ | ದರ ರೂ. ಪ್ರತಿ ಒಂದು ಊಟಕ್ಕೆ (ಎಲ್ಲಾ ತೆರಿಗೆ ಸೇರಿದಂತೆ) |
|---|---|---|---|
| 1 | 02 ರೀತಿ ಪಲ್ಯ (ಹುರುಳಿ ಕಾಯಿ ಪಲ್ಯ, ಕಾಬೂಲ್ ಕಡ್ಲೆ ಪಲ್ಯ), ಪೂರಿ + ಸಾಗು, ವೆಜ್ ಪಲಾವ್ + ಚಟ್ನಿ, ಸ್ವೀಟ್ ಜಿಲೇಬಿ, ರೈಸ್, ಸಾಂಬಾರ್, ರಸಂ, ಮೊಸರು, ಬಾಳೆಹಣ್ಣು, 500ML ವಾಟರ್ ಬಾಟಲ್ | 400 | |

**ಷರತ್ತು ಮತ್ತು ನಿಬಂಧನೆಗಳು:**

1. ಮುಚ್ಚಿದ ಲಕೋಟೆಯ ಮೇಲೆ **"ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮಕ್ಕೆ ಊಟವನ್ನು ಸರಬರಾಜು ಮಾಡಲು ದರಪಟ್ಟಿ"** ಎಂದು ಸ್ಪಷ್ಟವಾಗಿ ನಮೂದಿಸತಕ್ಕದ್ದು.
2. ದರಪಟ್ಟಿಗಳನ್ನು **ಕುಲಸಚಿವರು, ವಿಶ್ವವಿದ್ಯಾನಿಲಯ ಕಾರ್ಯಾಲಯ, ತುಮಕೂರು ವಿಶ್ವವಿದ್ಯಾನಿಲಯ, ಬಿ.ಹೆಚ್. ರಸ್ತೆ, ತುಮಕೂರು-572 103** ಇವರಿಗೆ ಮುದ್ದಾಂ ಅಥವಾ ಅಂಚೆಯ ಮೂಲಕ ತಲುಪಿಸಬಹುದು. ಅಂಚೆಯ ವಿಳಂಬಕ್ಕೆ ಅಥವಾ ಅಂಚೆಯು ತಲುಪದಿದ್ದಲ್ಲಿ ವಿಶ್ವವಿದ್ಯಾನಿಲಯವು ಜವಾಬ್ದಾರರಾಗಿರುವುದಿಲ್ಲ.
3. ದರಪಟ್ಟಿಯನ್ನು ಸಲ್ಲಿಸಲು ಕೊನೆಯ **ದಿನಾಂಕ: 16.05.2022 ಪೂರ್ವಾಹ್ನ 11-00.**
4. ದರಪಟ್ಟಿಯನ್ನು **ದಿನಾಂಕ:16.05.2022 ರಂದು ಅಪರಾಹ್ನ 12-00ಕ್ಕೆ ತೆರೆಯಲಾಗುವುದು.**
5. ದರಪಟ್ಟಿ ಸಲ್ಲಿಸುವ ಸಂಸ್ಥೆಯವರು ತಮ್ಮ ಸಂಸ್ಥೆಯ GSTIN No. ಮತ್ತು PAN No. ದಾಖಲೆಗಳನ್ನು ದರಪಟ್ಟಿಯ ಜೊತೆಗೆ ಲಗತ್ತಿಸಬೇಕು.
6. ಸರಬರಾಜು ಮಾಡಿದ 30 ದಿನಗಳೊಳಗೆ ಹುಂಡಿಯನ್ನು ಪಾವತಿಸಲಾಗುವುದು.
7. ದರಪಟ್ಟಿಗಳನ್ನು ಯಾವುದೇ ಕಾರಣ ನೀಡದೆ ಅಂಗೀಕರಿಸುವ ಅಥವಾ ತಿರಸ್ಕರಿಸುವ ಪೂರ್ಣ ಹಕ್ಕನ್ನು ವಿಶ್ವವಿದ್ಯಾನಿಲಯವು ಕಾಯ್ದಿರಿಸಿಕೊಂಡಿದೆ.
8. ಷರತ್ತುಬದ್ಧ ದರಪಟ್ಟಿಗಳನ್ನು ಪರಿಗಣಿಸಲಾಗುವುದಿಲ್ಲ.
9. ಪ್ರತಿ ಸಂಸ್ಥೆಯವರು ಏಕೈಕ ದರಪಟ್ಟಿಯನ್ನು ಮಾತ್ರ ಸಲ್ಲಿಸತಕ್ಕದ್ದು.
10. ದರಪಟ್ಟಿಯು ರೂ. ಒಂದು ಲಕ್ಷ ಮಿತಿಗೊಳಪಟ್ಟಿರತಕ್ಕದ್ದು.
11. ದರಪಟ್ಟಿಯಲ್ಲಿ ನಮೂದಿಸಿರುವ ಊಟದ ಪ್ರಮಾಣವನ್ನು ಹೆಚ್ಚಿಸುವ, ಕಡಿಮೆಗೊಳಿಸುವ ಅಥವಾ ರದ್ದು ಪಡಿಸುವ ಹಕ್ಕನ್ನು ವಿಶ್ವವಿದ್ಯಾನಿಲಯವು ಕಾಯ್ದಿರಿಸಿಕೊಂಡಿದೆ.
12. ಸರಬರಾಜು ಆದೇಶದಲ್ಲಿ ನೀಡುವ ಎಲ್ಲಾ ಷರತ್ತುಗಳನ್ನು ಪಾಲಿಸಬೇಕು.

(ಪು.ತಿ.ನೋ)

13. ಹೆಚ್ಚಿನ ವಿವರಗಳು ಅಥವಾ ಮಾಹಿತಿಯು ಅಗತ್ಯವಿದ್ದಲ್ಲಿ ಕುಲಸಚಿವರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು ಇವರನ್ನು ಸಂಪರ್ಕಿಸಬಹುದು.

ಆದೇಶದ ಮೇರೆಗೆ,

ಉಪಕುಲಸಚಿವರು
(ಸಾಮಾನ್ಯ ವಿಭಾಗ)
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಪ್ರತಿಗಳು:

1. ಸಿಸ್ಟಮ್ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು. (ಇಂದೇ ವೆಬ್‌ಸೈಟ್‌ನಲ್ಲಿ ಪ್ರಕಟಿಸತಕ್ಕದ್ದು)
2. ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಕಚೇರಿ ಪ್ರತಿ.